ಅ) ಸವದತ್ತಿ–ಧಾರವಾಡ ರಸ್ತೆಯ 38 6 ಕಿಮೀ ಉದ್ದವನ್ನು ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ–2ರ ಅಡಿಯಲ್ಲಿ ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಿದೆ

ಆ) ಈ ಸಂಬಂಧ ಪ್ರಸ್ತುತ ಸರ್ವೆ ಕೆಲಸ ಪ್ರಾರಂಭಿಕ ಹಂತದಲ್ಲಿದ್ದು, ಅಂದಾಜು ಪಟ್ಟಿಗಳನ್ನು ತಯಾರಿಸುವ ಹಂತದಲ್ಲಿದೆ

911(573) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ಪಟ್ಟಣದ ಒಳಚರಂಡಿ ಯೋಜನೆಗಾಗಿ 660/– ಕೋಟಿ ರೂ ಗಳ ಅಂದಾಜು ಪತ್ರಿಕೆ ತಯಾರಿಸಿ ಸಲ್ಲಿಸಿರುವ ಪ್ರಸ್ತಾವನೆ ಮಂಜೂರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಈ ಯೋಜನೆಯನ್ನು ಕೇಂದ್ರ ಸರ್ಕಾರದ ಪರಿಷ್ಕೃತ ರಾಷ್ಟ್ರೀಯ ಸಂರಕ್ಷಣಾ ಯೋಜನೆಯಡಿ ಮಂಜೂರಾತಿ ಪಡೆಯಲು ಅವಶ್ಯ ದಾಖಲೆಗಳನ್ನು ತಯಾರಿಸಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ,

ಇ) ಕರ್ನಾಟಕ ಫಾರ್ಮ ಪ್ರಾಜೆಕ್ಟ್‌ನಲ್ಲಿ ಈ ಯೋಜನೆಯನ್ನು ಸೇರಿಸಲು ಮತ್ತು ಯೋಜನೆ ಮಂಜೂರಾತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಬಂದಿದೆ

ಆ) ಈ ಯೋಜನೆಯನ್ನು ಕೇಂದ್ರ ಸರ್ಕಾರದ ಪರಿಷ್ಕೃತ ರಾಷ್ಟ್ರೀಯ ನದಿ ಸಂರಕ್ಷಣಾ ಯೋಜನೆಯಡಿ ಕೈಗೊಳ್ಳಲು ಪ್ರಸ್ತಾವನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಗೆ ಕಳುಹಿಸಿದ್ದು, ಇವರ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ

ಇ) ಉದ್ಭವಿಸುವುದಿಲ್ಲ

912(574) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ, ಸವದತ್ತಿ ತಾಲ್ಲೂಕಿನ ಸತ್ತಿಗೇರಿ ಬಸ್ ನಿಲ್ದಾಣ ನಿರ್ಮಾಣದ ಕಾಮಗಾರಿ ಮಂಜೂರಾಗಿ ಟೆಂಡರ್ ಕರೆದು ಗುತ್ತಿಗೆದಾರರಿಗೆ ವಹಿಸಿಕೊಡಲಾಗಿದೆಯೇ,

ಆ) ಹಾಗಿಲ್ಲದಿದ್ದಲ್ಲಿ, ಈ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎನ್ ಚೆಲುವರಾಯಸ್ವಾಮಿ (ಸಾರಿಗೆ ಸಚಿವರು)